**ಮಾನ್ಯ ವಿಧಾನಪರಿಷತ್ತಿನ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಮತ್ತು ಶ್ರೀ ಮಧು ಜಿ. ಮಾದೇಗೌಡ ಇವರುಗಳು ನಿಯಮ 72ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಕೃಷಿ ಸಚಿವರ ಉತ್ತರ.**

**ವಿಷಯ:** ಕೃಷಿ ಮಹಾವಿದ್ಯಾಲಯ, ವಿ.ಸಿ.ಫಾರಂ, ಮಂಡ್ಯ ಇಲ್ಲಿ ಸುಮಾರು 628 ಎಕರೆ ಪ್ರದೇಶವನ್ನು ಹೊಂದಿದೆ. ಪದವಿ, ಸ್ನಾತಕೋತ್ತರ ಪದವಿ ಹಾಗೂ ಸಂಶೋಧನೆ, ಚಟುವಟಿಕೆಗಳು ನಡೆಯುತ್ತಿವೆ. ಮೈಸೂರು ವಿಭಾಗದ ವ್ಯಾಪ್ತಿಯಲ್ಲಿ ಚಾಮರಾಜನಗರ ಹಾಗೂ ಹಾಸನದಲ್ಲಿ ಕೃಷಿ ಕಾಲೇಜುಗಳು ಪ್ರಾರಂಭಗೊಂಡಿವೆ. ಮೈಸೂರಿನಲ್ಲಿ ತೋಟಗಾರಿಕಾ ಕಾಲೇಜು ಪ್ರಾರಂಭಗೊಂಡಿದೆ. ಸದರಿ ಮೈಸೂರು ವಿಭಾಗದ ಜಿಲ್ಲೆಗಳಲ್ಲಿ ಸುಮಾರು 10 ಕಡೆ ಕೃಷಿ ಸಂಶೋಧನಾ, ತರಭೇತಿ, ಕೃಷಿ ವಿಜ್ಞಾನ ಕೇಂದ್ರಗಳಿವೆ ಹಾಗೂ 3 ಕಡೆ ಕೃಷಿ ವಿಜ್ಞಾನ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿವೆ. ಮೈಸೂರು ವಿಭಾಗ 4 ಪ್ರಮುಖ ಜಲಾಶಯಗಳಿದ್ದು, ಕೃಷಿ ಮತ್ತುತೋಟಗಾರಿಕೆ ಚಟುವಟಿಕೆಗಳು ಪ್ರಧಾನವಾಗಿರುತ್ತದೆ. ಕೃಷಿಯಲ್ಲಿ ತಾಂತ್ರಿಕತೆ, ಆಧುನಿಕತೆ ಮತ್ತು ಸಂಶೋಧನೆ ತೀರಾ ಅವಶ್ಯಕವಾಗಿದೆ. ಈ ಎಲ್ಲಾ ಹಿನ್ನೆಲೆಯಲ್ಲಿ ವಿ.ಸಿ.ಫಾರಂ, ಕೃಷಿ ಮಹಾವಿದ್ಯಾಲಯದಲ್ಲಿ ಅಗತ್ಯವಿರುವ ಮಾನವ ಸಂಪನ್ಮೂಲ ಹಾಗೂ ಮೂಲಭೂತ ಸೌಲಭ್ಯಗಳಿರುವುದರಿಂದ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ ಸ್ಥಾಪಿಸುವ ಕುರಿತಾದ ಮಹತ್ವದ ವಿಷಯ ಕುರಿತು ಮಾನ್ಯ ಕೃಷಿ ಸಚಿವರ ಗಮನ ಸೆಳೆಯಬಯಸುತ್ತೇನೆ.

***

**ಉತ್ತರ:** ಕರ್ನಾಟಕ ರಾಜ್ಯದಲ್ಲಿ ಕೃಷಿ ಹಾಗೂ ಕೃಷಿ ಪೂರಕ ವಿಶ್ವವಿದ್ಯಾನಿಲಯಗಳಾದ ಕೃ.ವಿ.ವಿ, ಬೆಂಗಳೂರು / ಕೃ.ವಿ.ವಿ, ಧಾರವಾಡ / ಕೃ.ವಿ.ವಿ, ರಾಯಚೂರು / ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕಾ ವಿಶ್ವವಿದ್ಯಾನಿಲಯ, ಶಿವಮೊಗ್ಗ ಮತ್ತು ತೋಟಗಾರಿಕಾ ವಿಶ್ವವಿದ್ಯಾನಿಲಯ, ಬಾಗಲಕೋಟೆ ಹಾಗೂ ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾನಿಲಯಗಳು ಈಗಾಗಲೇ ಸ್ಥಾಪನೆಗೊಂಡಿದ್ದು, ಅವು ಕೃಷಿ ಮತ್ತು ಕೃಷಿ ಪೂರಕ ವಿಷಯಗಳಲ್ಲಿ ಬೋಧನೆ, ಸಂಶೋಧನೆ ಹಾಗೂ ವಿಸ್ತರಣೆ ಚಟುವಟಿಕೆಗಳಲ್ಲಿ ತೊಡಗಿಕೊಂಡಿರುತ್ತವೆ.

........2

ಮೈಸೂರು ವಿಭಾಗಕ್ಕೆ ಸೇರಿರುವ ಪ್ರದೇಶಗಳಾದಂತಹ **ಮಂಡ್ಯ,** ಚಾಮರಾಜನಗರ, ಮಡಿಕೇರಿ, ಹಾಸನ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಕೃಷಿ ಹಾಗೂ ಕೃಷಿ ಪೂರಕ ವಿಷಯಗಳ ಬೋಧನೆ, ಸಂಶೋಧನೆ ಹಾಗೂ ವಿಸ್ತರಣಾ ಚಟುವಟಿಕೆಗಳಿಗೆ ಹೆಚ್ಚಿನ ಆದ್ಯತೆ ನೀಡುವ ನಿಟ್ಟಿನಲ್ಲಿ ವಲಯ ಕೃಷಿ ಸಂಶೋಧನಾ ಕೇಂದ್ರ, **ವಿ.ಸಿ.ಫಾರಂ, ಮಂಡ್ಯ; ಕೃಷಿ ಮಹಾವಿದ್ಯಾಲಯ, ಮಂಡ್ಯ; ಕೃಷಿ ವಿಜ್ಞಾನ ಕೇಂದ್ರ, ಮಂಡ್ಯ; ಸಾವಯವ ಕೃಷಿ ಸಂಶೋಧನಾ ಕೇಂದ್ರ / ವಿಸ್ತರಣಾ ಶಿಕ್ಷಣ ಘಟಕ, ನಾಗನಹಳ್ಳಿ (ಮೈಸೂರು ಜಿಲ್ಲೆ); ಕೃಷಿ ಮಹಾವಿದ್ಯಾಲಯ, ಹಾಸನ; ಕೃಷಿ ಮಹಾವಿದ್ಯಾಲಯ, ಚಾಮರಾಜನಗರ; ಕೃಷಿ ವಿಜ್ಞಾನ ಕೇಂದ್ರ, ಚಾಮರಾಜನಗರ; ಅಖಿಲ ಭಾರತ ಸುಸಂಘಟಿತ ಸಂಶೋಧನಾ ಪ್ರಾಯೋಜನೆ (ಹತ್ತಿ) ಮತ್ತು ಅಖಿಲ ಭಾರತ ಸುಸಂಘಟಿತ ಸಂಶೋಧನಾ ಪ್ರಾಯೋಜನೆ (ಜೋಳ), ಚಾಮರಾಜನಗರ** ಮುಂತಾದ ಸಂಸ್ಥೆಗಳು ಕಾರ್ಯನಿರತವಾಗಿದ್ದು ಸರ್ವತೋಮುಖ ಕೃಷಿ ಅಭಿವೃದ್ಧಿಗೆ ಒತ್ತು ನೀಡುತ್ತಿದೆ.

**ಇದಲ್ಲದೇ ತೋಟಗಾರಿಕಾ ವಿಷಯಗಳಲ್ಲಿ ಬೋಧನೆ, ಸಂಶೋಧನೆ ಹಾಗೂ ವಿಸ್ತರಣೆ ವಿಷಯಗಳಿಗೆ ಹೆಚ್ಚು ಒತ್ತು ನೀಡಲು ತೋಟಗಾರಿಕಾ ಮಹಾವಿದ್ಯಾಲಯ, ಮೈಸೂರು ಈಗಾಗಲೇ ಕಾರ್ಯನಿರ್ವಹಿಸುತ್ತಿವೆ.**

ಇದೇ ರೀತಿ ಕೃಷಿ ಮಹಾವಿದ್ಯಾಲಯ, ಹಾಸನದಲ್ಲಿ ಸ್ನಾತಕ ಹಾಗೂ ಸ್ನಾತಕೋತ್ತರ ಪದವಿಗಳಾದಂತಹ ಕೃಷಿ, ಆಹಾರ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಸ್ನಾತಕೋತ್ತರ ಪದವಿಗಳಾದಂತಹ ಕೀಟ ಶಾಸ್ತ್ರ, ಅಣ್ವಿಕ ಜೀವಶಾಸ್ತ್ರ ಹಾಗೂ ಜೈವಿಕ ತಂತ್ರಜ್ಞಾನ, ಮತ್ತು ಆಹಾರ ಸಂಸ್ಕರಣಾ ತಂತ್ರಜ್ಞಾನಗಳಿಗೆ ಬೋಧನೆ ಮಾಡಲಾಗುತ್ತಿದೆ. ಜೈವಿಕ ಅನಿಲದ ಸಂಶೋಧನೆಗೆ ಹೆಚ್ಚಿನ ಆದ್ಯತೆ ನೀಡಲು ಹಾಸನದ ಜೈವಿಕ ಅನಿಲ ಸಂಶೋಧನಾ ಘಟಕ ಚಾಲನೆಯಲ್ಲಿದೆ. ಹಾಸನ ಪ್ರಾಂತ್ಯದಲ್ಲಿ ಕೃಷಿ ವಿಜ್ಞಾನ ಕೇಂದ್ರ, ಕಂದ್ಲಿ ಹಾಗೂ ಕೃಷಿ ಸಂಶೋಧನಾ ಕೇಂದ್ರ, ಗುಂಜೇವು ಮತ್ತು ಕೃಷಿ ಸಂಶೋಧನಾ ಕೇಂದ್ರ, ಮಡೆನೂರು ಪ್ರಸ್ತುತದಲ್ಲಿ ಕಾರ್ಯನಿರ್ವಹಿಸುತ್ತಿವೆ.

ಈ ಮೇಲೆ ವಿವರಿಸಿರುವ ಎಲ್ಲಾ ಬೋಧನಾ, ಸಂಶೋಧನಾ ಹಾಗೂ ವಿಸ್ತರಣಾ ಕೇಂದ್ರಗಳು ಪ್ರಾಂತೀಯ ಬೆಳೆಗಳಾದಂತಹ ಭತ್ತ, ಕಬ್ಬು ಮತ್ತು ರಾಗಿ (ಮಂಡ್ಯ), ಅಡಿಕೆ, ತೆಂಗು, ಮುಸುಕಿನ ಜೋಳ, ಆಲೂಗಡ್ಡೆ (ಹಾಸನ), ಹತ್ತಿ ಮತ್ತು ಜೋಳ (ಚಾಮರಾಜನಗರ) ಹಾಗೂ ಅರಣ್ಯ ಬೆಳೆಗಳಿಗೆ (ಪೊನ್ನಂಪೇಟೆ) ಹೆಚ್ಚಿನ ಒತ್ತು ನೀಡುತ್ತಿವೆ.

......3

ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಬರುವ ಕೃಷಿ ಮತ್ತು ಕೃಷಿ ಪೂರಕ ಕಾಲೇಜುಗಳು, ಸಂಶೋಧನಾ ಕೇಂದ್ರಗಳು ಹಾಗೂ ವಿಸ್ತರಣಾ ಘಟಕಗಳು ಮೈಸೂರು ವಿಭಾಗಕ್ಕೆ ತನ್ನದೇ ಆದಂತಹ ಕೊಡುಗೆಗಳನ್ನು ಸತತವಾಗಿ ಹಲವಾರು ದಶಕಗಳಿಂದ ನೀಡುತ್ತಾ ಬಂದಿವೆ. ಆದ್ದರಿಂದ, ವಲಯ ಕೃಷಿ ಸಂಶೋಧನಾ ಕೇಂದ್ರ, ವಿ.ಸಿ.ಫಾರಂ, ಮಂಡ್ಯ, ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಹೃದಯಭಾಗವೆಂದೇ ಗುರುತಿಸಲ್ಪಟ್ಟಿದೆ. ಆದ್ದರಿಂದ ವಿ.ಸಿ.ಫಾರಂ, ಮಂಡ್ಯದಲ್ಲಿ ಪ್ರತ್ಯೇಕ ಹೊಸ ಕೃಷಿ ಹಾಗೂ ತೋಟಗಾರಿಕಾ ವಿಶ್ವವಿದ್ಯಾನಿಲಯ ಸ್ಥಾಪನೆ ಮಾಡುವ ಕುರಿತು ಪರಿಶೀಲಿಸಲಾಗುವುದು.

ಇ-ಸಂಖ್ಯೆ: AGRI/26/AUB/2023

(ಎನ್. ಚಲುವರಾಯಸ್ವಾಮಿ)
ಕೃಷಿ ಸಚಿವರು